# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 873 (1014) |
| ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು ) |
| ಉತ್ತರಿಸಬೇಕಾದ ದಿನಾಂಕ | : | 25.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ 117 ಮೌಲಾನಾ ಆಜಾದ್ ಮಾದರಿ ಶಾಲೆಗಳು ಹಾಗೂ ಉರ್ದು ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆ(KPS)ಗಳಾಗಿ ಉನ್ನತೀಕರಿಸುವ ಯೋಜನೆಯು. ಪ್ರಸ್ತುತ ಯಾವ ಹಂತದಲ್ಲಿದೆ; | 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-212 & 213ರಲ್ಲಿ ಘೋಷಿಸಿರುವಂತೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಮೌಲಾನಾ ಆಜಾದ್ ಆಂಗ್ಲ ಮಾಧ್ಯಮ ಮಾದರಿ ಶಾಲೆಗಳನ್ನು ಆಯ್ಕೆ ಮಾಡಿ, 2025-26ನೇ ಸಾಲಿನಲ್ಲಿ 100 ಕರ್ನಾಟಕ ಮೌಲಾನಾ ಆಜಾದ್ ಪಬ್ಲಿಕ್ ಶಾಲೆಗಳಲ್ಲಿ LKG ಪ್ರಾರಂಭಿಸಲಾಗಿರುತ್ತದೆ. 2026-27ನೇ ಸಾಲಿನಲ್ಲಿ UKG ತರಗತಿಗಳನ್ನು ಪ್ರಾರಂಭಿಸಲಾಗಿರುತ್ತದೆ.<br><br>ಮತ್ತು<br>ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಅತಿ ಹೆಚ್ಚು ದಾಖಲಾತಿ ಹೊಂದಿರುವ 100 ಉರ್ದು ಮಾಧ್ಯಮದ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆ (KPS) ಮಾದರಿಯಲ್ಲಿ ಉನ್ನತೀಕರಿಸಲು ಶಾಲೆಗಳನ್ನು ಆಯ್ಕೆ ಮಾಡಿ ಸರ್ಕಾರಿ ಆದೇಶ ಹೊರಡಿಸಲಾಗಿದ್ದು, ಸದರಿ ಶಾಲೆಗಳನ್ನು ಪ್ರಾರಂಭಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ನೀಡಲಾಗಿರತ್ತದೆ.<br><br>ಪ್ರಸ್ತುತ ಉನ್ನತೀಕರಿಸಲಾಗುತ್ತಿರುವ ಶಾಲೆಗಳ ಕಟ್ಟಡ ಕಾಮಗಾರಿಗಳನ್ನು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ವತಿಯಿಂದ ಟೆಂಡರ್ ಪ್ರಕ್ರಿಯೆ ಕೈಗೊಂಡಿದ್ದು, ವಿವಿಧ ಹಂತಗಳಲ್ಲಿರುತ್ತವೆ. |
| ಆ) | ಈ ಯೋಜನೆಗಾಗಿ ಸರ್ಕಾರ ಒಟ್ಟು ಎಷ್ಟು ಅನುದಾನ ಮಂಜೂರು ಮಾಡಿದ್ದು, ಇದುವರೆಗೆ ಎಷ್ಟು ವೆಚ್ಚ ಮಾಡಲಾಗಿದೆ; | ಸದರಿ ಯೋಜನೆಗಾಗಿ ಸರ್ಕಾರವು 100.00ಕೋಟಿ ಅನುದಾನವನ್ನು ಮಂಜೂರು ಮಾಡಿದ್ದು, ನೋಡಲ್ ಏಜೆನ್ಸಿಯಾದ ರಾಜೀವಗಾಂಧಿ ವಸತಿ ನಿಗಮ ನಿಯಮಿತ ಬೆಂಗಳೂರು ಇವರಿಗೆ ಸಂದಾಯ ಮಾಡಲಾಗಿದೆ. |
| ಇ) | 117 ಶಾಲೆಗಳ ಪೈಕಿ ಎಷ್ಟು ಶಾಲೆಗಳಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿವೆ; ಎಷ್ಟು ಶಾಲೆಗಳಲ್ಲಿ ಕಾಮಗಾರಿ ಪ್ರಗತಿಯಲ್ಲಿವೆ; ಹಾಗೂ ಎಷ್ಟು ಶಾಲೆಗಳಲ್ಲಿ ಇನ್ನೂ ಕಾಮಗಾರಿ ಆರಂಭವಾಗಿಲ್ಲ; (ಸಂಪೂರ್ಣ ಮಾಹಿತಿ ಒದಗಿಸುವುದು) | 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-212 & 213ರಲ್ಲಿ ಘೋಷಿಸಿರುವಂತೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಮೌಲಾನಾ ಆಜಾದ್ ಆಂಗ್ಲ ಮಾಧ್ಯಮ ಮಾದರಿ ಶಾಲೆಗಳು ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಅತಿ ಹೆಚ್ಚು ದಾಖಲಾತಿ ಹೊಂದಿರುವ ಉರ್ದು ಮಾಧ್ಯಮದ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆ ಉನ್ನತೀಕರಿಸಲಾಗುತ್ತಿರುವ (KPS) ಶಾಲೆಗಳ ಮಾದರಿಯಲ್ಲಿ ಕಟ್ಟಡ ಕಾಮಗಾರಿಗಳನ್ನು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ವತಿಯಿಂದ ಟೆಂಡರ್ ಪ್ರಕ್ರಿಯೆ ಕೈಗೊಂಡಿದ್ದು, ವಿವಿಧ ಹಂತಗಳಲ್ಲಿರುತ್ತವೆ. |

| | | |
|---|---|---|
| **ಈ)** | ಕಾಮಗಾರಿಯಲ್ಲಿ ಉಂಟಾಗಿರುವ ವಿಳಂಬಕ್ಕೆ ಕಾರಣಗಳೇನು; ಕಾಮಗಾರಿಯನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; | ಸದರಿ ಯೋಜನೆಯು ಪ್ರಸ್ತುತ ಟೆಂಡರ್ ಪ್ರಕ್ರಿಯೆಯ ಹಂತದಲ್ಲಿರುವುದರಿಂದ, ಕಟ್ಟಡ ನಿರ್ಮಾಣ ಕಾಮಗಾರಿಯು ಇನ್ನೂ ಪ್ರಾರಂಭವಾಗಿರುವುದಿಲ್ಲ. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅನುಷ್ಠಾನ ಏಜೆನ್ಸಿಯವರಿಗೆ ಸೂಚಿಸಲಾಗಿದೆ. |
| **ಉ)** | ಉನ್ನತೀಕರಣಗೊಂಡ ಶಾಲೆಗಳಲ್ಲಿ ವಿಜ್ಞಾನ ಪ್ರಯೋಗಾಲಯ, ಕಂಪ್ಯೂಟರ್ ಲ್ಯಾಬ್, ಗ್ರಂಥಾಲಯ, ಕ್ರೀಡಾ ಸೌಲಭ್ಯ ಹಾಗೂ ಸ್ಮಾರ್ಟ್ ತರಗತಿಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕರ್ನಾಟಕ ಪಬ್ಲಿಕ್ ಶಾಲೆ (KPS) ಮಾದರಿಯಲ್ಲಿ ಉನ್ನತೀಕರಿಸಲಾಗುವ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಹಾಗೂ ಆಧುನಿಕ ಶಿಕ್ಷಣ ಒದಗಿಸುವ ಉದ್ದೇಶದಿಂದ ಅಗತ್ಯವಿರುವ ವಿಜ್ಞಾನ ಪ್ರಯೋಗಾಲಯ, ಕಂಪ್ಯೂಟರ್ ಲ್ಯಾ , ಗ್ರಂಥಾಲಯ, ಕ್ರೀಡಾ ಸೌಲಭ್ಯ ಹಾಗೂ -ಸ್ಮಾರ್ಟ್ ತರಗತಿಗಳ ವ್ಯವಸ್ಥೆಯನ್ನು ಹಂತ ಹಂತವಾಗಿ ಒದಗಿಸಲು ಕ್ರಮವಹಿಸಲಾಗುವುದು. |

**ಸಂಖ್ಯೆ: MWD-LMQ/140/2026**

**(ಯು.ಟಿ.ಖಾದರ್ ಫರೀದ್)**
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು